# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ,ತುಮಕೂರು-572 103☎:0816 - 2255650,2273511 ಫ್ಯಾಕ್ಸ್ : 0816-2270719


ಸಂಖ್ಯೆ:ತುವಿ: ಪ.ವಿ:ವಿ.ಶಿ.-03:2021-22: ದಿನಾಂಕ: 19.04.2021

## ಪರಿಷ್ಕೃತ ಸುತ್ತೋಲೆ

ವಿಷಯ: ಪರೀಕ್ಷಾ ಕೇಂದ್ರಗಳಲ್ಲಿ ಸೂಕ್ತ ಮುಂಜಾಗ್ರತ ಕ್ರಮ ವಹಿಸುವ ಕುರಿತು.

.....

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೋವಿಡ್- 19 ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ, ಮಾರ್ಚ್/ಏಪ್ರಿಲ್/ಮೇ 2021 ರಲ್ಲಿ ನಡೆಯುತ್ತಿರುವ ವಿವಿಧ ಸ್ನಾತಕೋತ್ತರ/ ಸ್ನಾತಕ ಪದವಿ/ ಸ್ನಾತಕ ಶಿಕ್ಷಣ ಪದವಿ ಮತ್ತು ಸ್ನಾತಕ ದೈಹಿಕ ಶಿಕ್ಷಣ ಪದವಿ ಪರೀಕ್ಷೆಗಳನ್ನು ಯಶಸ್ವಿಯಾಗಿ ನಡೆಸಲು ಕರ್ನಾಟಕ ಸರ್ಕಾರದ ಇತ್ತೀಚಿನ ಪರೀಕ್ಷಾ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವುದು ಹಾಗೂ ಈ ಕೆಳಕಂಡ ಪರೀಕ್ಷಾ ಮುಂಜಾಗ್ರತ ಕ್ರಮಗಳನ್ನು ಪಾಲಿಸಲು ತಮಗೆ ಈ ಮೂಲಕ ಸೂಚಿಸಲಾಗಿದೆ.

- ಸೈದ್ಧಾಂತಿಕ ಪರೀಕ್ಷೆಗಳಿಗೆ ಸಂಬಂಧಿಸಿದ ಸೂಕ್ತ ವಿವರಗಳೊಂದಿಗೆ ತಮ್ಮ ತಾಲ್ಲೂಕಿನ ಕೋವಿಡ್-19 ಕ್ಕೆ ಸಂಬಂಧಿಸಿದ ಅಧಿಕಾರಿಗಳಿಗೆ ಮತ್ತು ವೈದ್ಯಾಧಿಕಾರಿಗಳಿಗೆ ಮಾಹಿತಿಯನ್ನು ನೀಡಿ ಮುಂಜಾಗ್ರತ ಕ್ರಮ ವಹಿಸಿ ಪರೀಕ್ಷೆಗಳನ್ನು ಸುಗಮವಾಗಿ ನಡೆಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಈ ಮೂಲಕ ಕೋರಲಾಗಿದೆ.
- ಪರೀಕ್ಷೆಗಳು ಪ್ರಾರಂಭವಾಗುವುದಕ್ಕಿಂತ ಮುಂಚಿತವಾಗಿ ಪರೀಕ್ಷಾ ಕೇಂದ್ರಗಳಲ್ಲಿ ಆಗಮಿಸುವ ಮತ್ತು ನಿರ್ಗಮಿಸುವ ದ್ವಾರಗಳಲ್ಲಿಯೇ ಕಡ್ಡಾಯವಾಗಿ ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಥರ್ಮಲ್ ಸ್ಕ್ಯಾನಿಂಗ್ ಮಾಡುವುದು. ಆದ್ದರಿಂದ ವಿದ್ಯಾರ್ಥಿಗಳಿಗೆ ಪರೀಕ್ಷೆಗಳು ಪ್ರಾರಂಭವಾಗುವುದಕ್ಕಿಂತ ಒಂದು ಗಂಟೆ ಮುಂಚಿತವಾಗಿಯೇ ಪರೀಕ್ಷಾ ಕೇಂದ್ರದಲ್ಲಿ ಹಾಜರಿರುವಂತೆ ಸೂಚಿಸುವುದು.
- ಪರೀಕ್ಷಾ ಕೇಂದ್ರಗಳಲ್ಲಿ ಆಗಮಿಸುವ ಮತ್ತು ನಿರ್ಗಮಿಸುವ ಸಮಯದಲ್ಲಿ ಜನಸಂದಣಿಯಾಗದಂತೆ ಕ್ರಮವಹಿಸುವುದು.
- ವಿದ್ಯಾರ್ಥಿಗಳು ಕೋವಿಡ್-19 ಪರೀಕ್ಷೆ ಮಾಡಿಸಿ ನೆಗೆಟಿವ್ ವರದಿ ಇದ್ದಲ್ಲಿ ಪರೀಕ್ಷಾ ಕೇಂದ್ರಕ್ಕೆ ಹಾಜರುಪಡಿಸುವುದು..
- ಸಾಧಾರಣಕ್ಕಿಂತ ಹೆಚ್ಚು ದೇಹದ ಉಷ್ಣಾಂಶ, ಜ್ವರ ಮತ್ತು ಕೆಮ್ಮು ಇರುವಂತಹ ವಿದ್ಯಾರ್ಥಿಗೆ ಪ್ರತ್ಯೇಕ ಕೊಠಡಿಯಲ್ಲಿ ಪರೀಕ್ಷೆ ಬರೆಯಲು ವ್ಯವಸ್ಥೆ ಮಾಡುವುದು.
- ಆರೋಗ್ಯದ ಹಿತದೃಷ್ಟಿಯಿಂದ ವಿದ್ಯಾರ್ಥಿಗಳಿಗೆ ನೀರಿನ ಬಾಟಲ್‌ನ್ನು ಮನೆಯಿಂದ ತರುವಂತೆ ಸೂಚಿಸುವುದು.

( 2 ನೇ ಪುಟಕ್ಕೆ)

- ವಿದ್ಯಾರ್ಥಿಗಳು ಮತ್ತು ಪರೀಕ್ಷಾ ಸಿಬ್ಬಂದಿ ಸ್ವಚ್ಛವಾದ ಮಾಸ್ಕ್‌ನ್ನು ಧರಿಸುವುದು (ಮೂಗು ಮತ್ತು ಬಾಯಿ ಮುಚ್ಚುವಂತಿರಬೇಕು) ಹಾಗೂ ಒಂದು ಸ್ವಚ್ಛವಾದ ಕರವಸ್ತ್ರವನ್ನು ತರುವುದು. ಒಂದು ವೇಳೆ ಮಾಸ್ಕ್‌ನ್ನು ಧರಿಸದಿದ್ದಲ್ಲಿ ಕಾಲೇಜಿನಿಂದ ವಿದ್ಯಾರ್ಥಿಗಳಿಗೆ ಮಾಸ್ಕ್‌ಗಳನ್ನು ವಿತರಿಸುವುದು.
- ಪ್ರವೇಶ ದ್ವಾರ, ಕೊಠಡಿಗಳಿಗೆ ಕಡ್ಡಾಯವಾಗಿ ಸ್ಯಾನಿಟೈಸರ್ ವ್ಯವಸ್ಥೆ ಕಲ್ಪಿಸುವುದರೊಂದಿಗೆ (ಡೆಸ್ಕ್ & ಚೇರ್ ಸೇರಿದಂತೆ) ಮತ್ತು ಶೌಚಾಲಯಗಳು ಸ್ವಚ್ಛವಾಗಿರಿಸಿ ಸ್ಯಾನಿಟೈಸರ್ ಮಾಡುವುದು
- ಸಿಬ್ಬಂದಿಗಳಿಗೆ ಹ್ಯಾಂಡ್ ಸ್ಯಾನಿಟೈಸರ್ ಮತ್ತು ಗ್ಲೌಸ್ ಉಪಯೋಗಿಸಲು ಸೂಚಿಸುವುದು.
- ಪರೀಕ್ಷಾ ಕಾರ್ಯದಲ್ಲಿ ಭಾಗವಹಿಸುವ ಎಲ್ಲಾ ಅಧಿಕಾರಿಗಳು / ಸಿಬ್ಬಂದಿಗಳು ಆರೋಗ್ಯ ಸೇತು ಆ್ಯಪ್‌ನ್ನು ಕಡ್ಡಾಯವಾಗಿ ಡೌನ್‌ಲೋಡ್ ಮಾಡಿಕೊಳ್ಳುವುದು ಮತ್ತು ಇತ್ತೀಚಿನ ಯು.ಜಿ.ಸಿ., ಕರ್ನಾಟಕ ಸರ್ಕಾರ ಮತ್ತು ವಿಶ್ವವಿದ್ಯಾನಿಲಯದ ವತಿಯಿಂದ ಹೊರಡಿಸಿರುವ ಕೋವಿಡ್-19 ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳುವುದು
- ಕೋವಿಡ್-19 ನ ಮುಂಜಾಗ್ರತ ಕ್ರಮಗಳನ್ನು (ಮಾಸ್ಕ್, ಸ್ಯಾನಿಟೈಸರ್, ಸಾಮಾಜಿಕ ಅಂತರ, ಥರ್ಮಲ್ ಸ್ಕ್ಯಾನಿಂಗ್, ನೀರಿನ ವ್ಯವಸ್ಥೆ) ಮಾಹಿತಿಗಾಗಿ ಸೂಚನಫಲಕಗಳಲ್ಲಿ ಪ್ರಕಟಿಸುವುದು.
- ಪರೀಕ್ಷಾ ಕೇಂದ್ರಗಳಿಗೆ ಜೋಡಣೆ ಮಾಡಲಾದ ಕಾಲೇಜಿನ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಸೂಕ್ತ ಮುಂಜಾಗ್ರತ ಕ್ರಮಗಳನ್ನು ವಹಿಸಿ ಪರೀಕ್ಷಾ ಕೇಂದ್ರದವರಿಗೆ ಸಂಪೂರ್ಣ ಸಹಕಾರ ನೀಡಲು ಸೂಚಿಸಲಾಗಿದೆ.

ಪರೀಕ್ಷಾ ಮುಖ್ಯ ಅಧೀಕ್ಷಕರುಗಳು/ ಮುಖ್ಯಸ್ಥರುಗಳು /ಪ್ರಾಂಶುಪಾಲರುಗಳು ಸಹಕರಿಸುವಂತೆ ಈ ಮೂಲಕ ಕೋರಲಾಗಿದೆ.

ಆದೇಶದ ಮೇರೆಗೆ,

19/4/21

ಕುಲಸಚಿವರು (ಪರೀಕ್ಷಾಂಗ)

ಗೆ,

1. ಪರೀಕ್ಷಾ ಮುಖ್ಯ ಅಧೀಕ್ಷಕರುಗಳು/ ಮುಖ್ಯಸ್ಥರುಗಳು /ಪ್ರಾಂಶುಪಾಲರು, ಎಲ್ಲಾ ಸ್ನಾತಕೋತ್ತರ ಪರೀಕ್ಷಾ ಕೇಂದ್ರಗಳು/ವಿಭಾಗಗಳು/ಸಂಯೋಜಿತ ಸ್ನಾತಕೋತ್ತರ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು/ಪರೀಕ್ಷಾ ಮುಖ್ಯ ಅಧೀಕ್ಷಕರುಗಳು / ಹೆಚ್ಚುವರಿ ಪರೀಕ್ಷಾ ಮುಖ್ಯ ಅಧೀಕ್ಷಕರುಗಳು, ಘಟಕ / ಸಂಯೋಜಿತ ಸ್ನಾತಕ/ಸ್ನಾತಕ ಶಿಕ್ಷಣ/ಸ್ನಾತಕ ದೈಹಿಕ ಶಿಕ್ಷಣ ಪದವಿ ಪರೀಕ್ಷಾ ಕೇಂದ್ರಗಳು / ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಕಛೇರಿ ಪ್ರತಿ.